ಕ್ರ.ಸಂಖ್ಯೆ-10

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಪುಟ್ಟಣ್ಣ ರವರು ಮಂಡಿಸಿರುವ ನಿಯಮ 72 ರ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

**ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಸೂಲಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾಸಗಿ ಬಡಾವಣೆಗಳನ್ನು ನಿರ್ಮಾಣ ಮಾಡಿದ್ದು, ಸದರಿ ಬಡಾವಣೆಯ ನಿವೇಶನದಾರರು ಪಂಚಾಯಿತಿಯಿಂದ ನೀಡುವ ಎಲ್ಲಾ ನಾಗರೀಕ ಸೌಲಭ್ಯಗಳಾದ ರಸ್ತೆ, ನೀರು, ಬೀದಿ ದೀಪ ಸೇರಿದಂತೆ ಎಲ್ಲವನ್ನು ಪಡೆದುಕೊಂಡಿರುತ್ತಾರೆ. ಆದರೆ ಈ ನಿವೇಶನದಾರರು ಮತ್ತು ಮನೆಗಳನ್ನು ಕಟ್ಟಿಕೊಂಡು ವಾಸ ಮಾಡುತ್ತಿರುವ ಮನೆಗಳನ್ನು ಪಂಚಾಯಿತಿಗೆ ಸೇರಿದ ಕಂದಾಯ ಪರಿಮಿತಿಯೊಳಗೆ ಸೇರಿಸಿಕೊಳ್ಳದೆ ಇರುವುದರಿಂದ ಗ್ರಾಮ ಪಂಚಾಯಿತಿಗೆ ಯಾವುದೇ ಆದಾಯ ಬರುತ್ತಿಲ್ಲ. ಈ ಬಡಾವಣೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೂ ಸೇರಿಸಿರುವುದಿಲ್ಲ. ಪಂಚಾಯಿತಿಯಿಂದ ಸೌಲಭ್ಯ ಪಡೆದುಕೊಳ್ಳುತ್ತಿರುವ ಇಂತಹ ಖಾಸಗಿ ಬಡಾವಣೆಗಳನ್ನು ಪಂಚಾಯಿತಿ ಕಂದಾಯ ವ್ಯಾಪ್ತಿಗೆ ಸೇರಿಸಿ ಕಂದಾಯ ಬಡಾವಣೆಗಳಿಂದ ಅಭಿವೃದ್ಧಿ ಶುಲ್ಕ ಹಾಗೂ ಕಂದಾಯವನ್ನು ಕಟ್ಟಿಸಿಕೊಳ್ಳುವ ಬಗ್ಗೆ.**

----

**ಉತ್ತರ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಮತ್ತು ಕ್ರಮಬದ್ಧವಲ್ಲದ ಆಸ್ತಿಗಳಿಗೆ ಅಂದರೆ ದಿನಾಂಕ 14/06/2013ರ ಪೂರ್ವದಲ್ಲಿ ನೊಂದಣಿ/ಕ್ರಯವಾಗಿರುವ/ಅಸ್ತಿತ್ವದಲ್ಲಿರುವ ಆಸ್ತಿಗಳಿಂದ ತೆರಿಗೆಯನ್ನು ಸೂಲಿಕೆರೆ ಗ್ರಾಮ ಪಂಚಾಯಿತಿಯಿಂದ ಸಂಗ್ರಹಿಸಲಾಗುತ್ತಿದೆ.

ದಿನಾಂಕ 14/06/2013ರ ನಂತರ ಕ್ರಯ/ನೊಂದಣಿ/ಸೃಜಿಸಲಾದ ಆಸ್ತಿಗಳನ್ನು ಗ್ರಾಮ ಪಂಚಾಯಿತಿಯ ಕರನಿರ್ಧರಣಾ ಪಟ್ಟಿಯಲ್ಲಿ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ ಹಾಗೂ ಸದ್ಯಕ್ಕೆ ಆಸ್ತಿಗಳ ಡಿಜಿಟಲೀಕರಣ ಪ್ರಕ್ರಿಯೆ ಜಾರಿಯಲ್ಲಿದ್ದು, ದಿನಾಂಕ 14/06/2013ರ ನಂತರ ಕ್ರಯವಾಗಿರುವ/ನೊಂದಣಿ/ ಅಸ್ತಿತ್ವದಲ್ಲಿರುವ ಆಸ್ತಿಗಳ ಸರ್ವೆ ಕಾರ್ಯ ಪ್ರಗತಿಯಲ್ಲಿದ್ದು, ಸದರಿ ಸ್ವತ್ತುಗಳನ್ನು ತೆರಿಗೆ ವ್ಯಾಪ್ತಿಗೆ ಒಳಪಡಿಸಲು ನಿಯಮಾನುಸಾರ ಕ್ರಮವಹಿಸಲಾಗುವುದು.

ಸಂಖ್ಯೆ: ಗ್ರಾಅಪ 312 ಗ್ರಾಪಂಅ 2021

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.